**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 53/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.09**

**ದಿನಾಂಕಃ 11.12.2025** **ಸಿಡಬ್ಲ್ಯೂ.14**

| | |
|---|---|
| ಹೆಸರು | ಗೋಣೆಪ್ಪ ಬಾರ್ಕಿ |
| ತಂದೆ ಹೆಸರು | ತಿಪ್ಪಣ್ಣ |
| ವಯಸ್ಸು | 37 ವರ್ಷ |
| ಉದ್ಯೋಗ | ಚಾಲಕ |
| ವಾಸ ಸ್ಥಳ | ಮಾಕನೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ಮತ್ತು 3 ರವರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಪಂಚರಿಗೆ ನೀಡಿದ ನೋಟಿಸ್ ಆಗಿದ್ದು ಅದನ್ನು ನಿಪಿ.12 ಎಂದು ಸಾಕ್ಷಿಯ ಸಹಿಯನ್ನು ನಿಪಿ.12 (ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಸಿಡಿ ಅಮಾನತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.9 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.9 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು 1 ವರ್ಷದ ಹಿಂದೆ ಒಂದು ಮದ್ಯಾಹ್ನ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಂದರ್ಭದಲ್ಲಿ ಪೊಲೀಸರು ನನಗೆ ಒಂದು ಸಿಡಿಯನ್ನು ತೋರಿಸಿರುತ್ತಾರೆ. ಸದರಿ ಸಿಡಿ ಗಲಾಟೆಗೆ ಸಂಬಂಧಿಸಿದ ಸಿಡಿ. ಸದರಿ ಸಂದರ್ಭದಲ್ಲಿ ಛಾಯ ಚಿತ್ರಗಳನ್ನು ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ಈಗಾಗಲೇ ನಿಪಿ.10 ಎಂದು ಗುರುತಿಸಲಾಗಿದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 20.12.2023 ರಂದು ಪೊಲೀಸರು ನನಗೆ ಹಾಗೂ ಚಾಸಾ.13 ರವರಿಗೆ ನೋಟಿಸ್ ಜಾರಿ ಮಾಡಿ ಪಂಚನಾಮೆಗೆ ಸಹಕರಿಸಲು ಕೇಳಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಂದರ್ಭದಲ್ಲಿ ಚಾಸಾ.1 ರವರೊಂದಿಗೆ ಆರೋಪಿತರು ಹಲ್ಲೆ ಮಾಡಿದ ವಿಚಾರವಾಗಿ ಚಾಸಾ.4 ರವರು

ವಿಡಿಯೋ ಮಾಡಿದ ಸಿಡಿಯನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯು ನಾವು ಹೋಗುವ ಪೂರ್ವದಲ್ಲಿ ಸಿಡಿಯನ್ನು ಪಡೆದುಕೊಂಡಿದ್ದರು ಎಂದು ನುಡಿಯುತ್ತಾರೆ. ಸದರಿ ಸಿಡಿ ಮಾಸ್ಟರ್ ಕಂಪನಿಯ 1.52 ಇ ಎಕ್ಸ ನ 700 ಎಂ ಬಿ /80 ಎಂ ಎನ್ ಕಾಂಪ್ಯಾಕ್ಟ ಡಿಸ್ಕ ಇತ್ತು ಎಂದರೆ ನನಗೆ ಗೊತ್ತಿಲ್ಲ. ಸದರಿ ಪಂಚನಾಮೆಯನ್ನು ಮದ್ಯಾಹ್ನ 12.15 ರಿಂದ 1.00 ಗಂಟೆವರೆಗೆ ಜರುಗಿಸಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ನನಗೆ ಸಿಡಿ ತೋರಿಸಿದ ಪೊಲೀಸರ ಹೆಸರು ಪದನಾಮೆ ಗೊತ್ತಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ನಿಪಿ.9 ಕ್ಕೆ ಪೊಲೀಸರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ